# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Add.Dir/JD North/LP/0081/2017-18 ದಿನಾಂಕ: 13-05-2019.

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 31/87/2, 87/3 &, 89 & 111, ಜಕ್ಕೂರು ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 05, ಯಲಹಂಕ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – 1, 2, 4 & 5 ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 26-04-2019.

2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/LP/0081/2017-18, ದಿನಾಂಕ: 06-10-2017.

* * * * * * *

ಆಸ್ತಿ ಸಂಖ್ಯೆ. 31/87/2, 87/3 &, 89 & 111, ಜಕ್ಕೂರು ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 05, ಯಲಹಂಕ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – 1 ವಿಂಗ್ – 1 & 2 ಮತ್ತು ಬ್ಲಾಕ್ – 2 ವಿಂಗ್ – 2 & 3 ರಲ್ಲಿ, 2 ತಳ + ನೆಲ + ಮೇಲಿನ 19 ಅಂತಸ್ತುಗಳು, ಬ್ಲಾಕ್ – 3 ರಲ್ಲಿ 2 ತಳ + ನೆಲ + ಮೇಲಿನ 18 ಅಂತಸ್ತುಗಳು, ಬ್ಲಾಕ್ – 5 ರಲ್ಲಿ ನೆಲ + ಮೇಲಿನ 2 ಅಂತಸ್ತುಗಳು ಮತ್ತು ಬ್ಲಾಕ್ – 5 ರಲ್ಲಿ ನೆಲ + ಮೇಲಿನ 1 ಅಂತಸ್ತಿನಲ್ಲಿ ಒಟ್ಟು 355 ಘಟಕಗಳು ಮತ್ತು 40 EWS ಘಟಕಗಳನ್ನೊಳಗೊಂಡಂತೆ ಒಟ್ಟಾರೆ 395 ಘಟಕಗಳುಳ್ಳ ವಸತಿ ಸಮುಚ್ಚಯ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 06-10-2017 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಬ್ಲಾಕ್ – 1 ವಿಂಗ್ – 1 & 2 ಮತ್ತು ಬ್ಲಾಕ್ – 2 ವಿಂಗ್ – 2 & 3 ರಲ್ಲಿ, 2 ತಳ + ನೆಲ + ಮೇಲಿನ 19 ಅಂತಸ್ತುಗಳು, ಬ್ಲಾಕ್ – 4 ರಲ್ಲಿ ನೆಲ + 2 ಅಂತಸ್ತು, ಬ್ಲಾಕ್ – 5 ರಲ್ಲಿ ನೆಲ + ಮೇಲಿನ 1 ಅಂತಸ್ತಿನಲ್ಲಿ ಒಟ್ಟು 324 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 02-05-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. 2,06,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000056 ದಿನಾಂಕ: 08-05-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ಬ್ಲಾಕ್ – 1, 2, 4 & 5 ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /–

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,
ಶ್ರೀ ಹೆಚ್.ಆರ್.ಚಂದ್ರಶೇಖರ್,
'ಶೋಭ', ಸರ್ಜಾಪುರ – ಮಾರತ್‌ಹಳ್ಳಿ ಹೊರವರ್ತುಲ ರಸ್ತೆ,
ದೇವರಬೀಸನಹಳ್ಳಿ, ಬೆಳ್ಳಂದೂರು ಪೋಸ್ಟ್,
ಬೆಂಗಳೂರು – 560 103.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಯಲಹಂಕ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ–ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddabi 13/5/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

13/5/19 13/5/19 13/5/19